ಬೆಂಗಳೂರು ಮೆಟ್ರೋ ರೈಲು ನಿಗಮ ನಿಯಮಿತ
BANGALORE METRO RAIL CORPORATION LIMITED

ಸಂಖ್ಯೆ: ಬೆಮೆರೈನಿನಿ/ಮುಸಸಂಅ/ಮಾಧ್ಯಮ ಪ್ರಕಟಣೆ/2024-25 ದಿನಾಂಕ: 27.12.2024

# ಮಾಧ್ಯಮ ಪ್ರಕಟಣೆ

**ವಿಷಯ: ಹೊಸ ವರ್ಷದ ಸಂಭ್ರಮಾಚರಣೆಗೆ ಮೆಟ್ರೋ ರೈಲು ಸೇವೆ ವಿಸ್ತರಣೆ**

ಬೆಂಗಳೂರು ಮೆಟ್ರೋ ರೈಲು ನಿಗಮ ನಿಯಮಿತವು (ಬಿಎಂಆರ್‌ಸಿಎಲ್) 2025ರ ಹೊಸ ವರ್ಷದ ಮುನ್ನಾದಿನದಂದು ನೇರಳೆ ಮತ್ತು ಹಸಿರು ಮಾರ್ಗಗಳಲ್ಲಿ ಮೆಟ್ರೋ ರೈಲು ಸೇವೆಗಳನ್ನು ವಿಸ್ತರಿಸುತ್ತಿದೆ. ಕೊನೆಯ ರೈಲು ಜನವರಿ 1, 2025 ರಂದು ಮುಂಜಾನೆ 02:00 ಗಂಟೆಗೆ ಎಲ್ಲಾ ಟರ್ಮಿನಲ್ ನಿಲ್ದಾಣಗಳಿಂದ ಹೊರಡಲಿದ್ದು, ನಾಡಪ್ರಭು ಕೆಂಪೇಗೌಡ ಮೆಟ್ರೋ ನಿಲ್ದಾಣ (ಮೆಜೆಸ್ಟಿಕ್)ನಿಂದ ಕೊನೆಯ ರೈಲು ಎಲ್ಲಾ ನಾಲ್ಕು ದಿಕ್ಕುಗಳಿಗೆ ಮುಂಜಾನೆ 2:40 ಗಂಟೆಗೆ ಹೊರಡುತ್ತವೆ.

ರೈಲುಗಳು 31 ಡಿಸೆಂಬರ್ 2024ರ ರಾತ್ರಿ 11.00 ರಿಂದ ದಿನದ ವಿಸ್ತೃತ ಸೇವಾ ಅವಧಿಯವರೆಗೆ 10 ನಿಮಿಷಗಳ ಮಧ್ಯಂತರದಲ್ಲಿ ಕಾರ್ಯನಿರ್ವಹಿಸುತ್ತವೆ. ಆದಾಗ್ಯೂ, ಎಂ.ಜಿ ರಸ್ತೆಯಲ್ಲಿ ಜನಸಂದಣಿ ಹೆಚ್ಚಾಗುವ ಸಾಧ್ಯತೆ ಇರುವುದರಿಂದ, ಡಿಸೆಂಬರ್ 31, 2024 ರಂದು ರಾತ್ರಿ 11:00 ಗಂಟೆಯಿಂದ ಎಂ.ಜಿ ರಸ್ತೆ ಮೆಟ್ರೋ ನಿಲ್ದಾಣದ ಪ್ರವೇಶ ಮತ್ತು ನಿರ್ಗಮನ ದ್ವಾರಗಳನ್ನು ಮುಚ್ಚಲಾಗುತ್ತದೆ. ಪ್ರಯಾಣಿಕರ ಬಳಕೆಗಾಗಿ ಹತ್ತಿರದ ನಿಲ್ದಾಣಗಳಾದ ಟ್ರಿನಿಟಿ ಮತ್ತು ಕಬ್ಬನ್ ಪಾರ್ಕ್‌ನಲ್ಲಿ ರೈಲುಗಳು ನಿಲ್ಲುತ್ತವೆ.

ಟ್ರಿನಿಟಿ ಅಥವಾ ಕಬ್ಬನ್ ಪಾರ್ಕ್ ಮೆಟ್ರೋ ನಿಲ್ದಾಣಗಳಿಂದ ಯಾವುದೇ ಗಮ್ಯಸ್ಥಾನಕ್ಕೆ ರಾತ್ರಿ 11:00 ಗಂಟೆಯ ನಂತರ ಪ್ರಯಾಣಿಸುವ ಪ್ರಯಾಣಿಕರು ₹ 50 ಬೆಲೆಯ ರಿಟರ್ನ್ ಜರ್ನಿ ಪೇಪರ್ ಟಿಕೆಟ್ ಅನ್ನು ಬಳಸಲು ಸೂಚಿಸಲಾಗಿದೆ. ಈ ಕಾಗದದ ಟಿಕೆಟ್ ಎಲ್ಲಾ ಮೆಟ್ರೋ ನಿಲ್ದಾಣಗಳಲ್ಲಿ 31ನೇ ಡಿಸೆಂಬರ್ 2024ರ ಬೆಳಗ್ಗೆ 8:00 ರಿಂದ ಮುಂಗಡವಾಗಿ ಖರೀದಿಸಲು ಲಭ್ಯವಿರುತ್ತದೆ. ಸಾಮಾನ್ಯ QR ಕೋಡ್ ಟಿಕೆಟ್ ಗಳು ಮತ್ತು ಕಾರ್ಡ್‌ಗಳು ಈ ನಿಲ್ದಾಣಗಳಿಂದ ಪ್ರಯಾಣಿಸಲು ಸಹ ಮಾನ್ಯವಾಗಿರುತ್ತವೆ.

ಯಾವುದೇ ನಿರ್ದಿಷ್ಟ ನಿಲ್ದಾಣದಲ್ಲಿ ಜನಸಂದಣಿಯನ್ನು ತಪ್ಪಿಸಲು, ಪ್ರಯಾಣಿಕರು ವೈಟ್‌ಫೀಲ್ಡ್ ಮತ್ತು ರೇಷ್ಮೆ ಸಂಸ್ಥೆ ನಿಲ್ದಾಣಗಳ ಕಡೆಗೆ ಹೋಗುವವರು ಪ್ರಯಾಣಕ್ಕಾಗಿ ಟ್ರಿನಿಟಿ ಮೆಟ್ರೋ ನಿಲ್ದಾಣವನ್ನು ಬಳಸಬಹುದು ಮತ್ತು ಚಲ್ಲಘಟ್ಟ ಹಾಗೂ ಮಾದಾವರ ಕಡೆಗೆ ಪ್ರಯಾಣಿಸುವ ಪ್ರಯಾಣಿಕರು ಕಬ್ಬನ್ ಪಾರ್ಕ್ ಮೆಟ್ರೋ ನಿಲ್ದಾಣವನ್ನು ಬಳಸಿಕೊಳ್ಳಬಹುದು. ನಿಗಮವು ಸಾರ್ವಜನಿಕರು ತಮ್ಮ ಪ್ರಯಾಣವನ್ನು ತಮಗೆ ಅನುಗುಣವಾಗಿ ಯೋಜಿಸಲು ಮತ್ತು ಸುರಕ್ಷಿತ ಹಾಗೂ ಸುಗಮ ಪ್ರಯಾಣಕ್ಕಾಗಿ ನಿಮ್ಮ ಸಹಕಾರವನ್ನು ನೀಡುವಂತೆ ಕೋರಿದೆ.

**ಬಿಎಂಆರ್‌ಸಿಎಲ್ ಎಲ್ಲರಿಗೂ ಸುರಕ್ಷಿತ ಮತ್ತು ಸಂತೋಷದಾಯಕ ಹೊಸ ವರ್ಷದ ಶುಭಾಶಯಗಳನ್ನು ಕೋರುತ್ತದೆ!**

**ಮುಖ್ಯ ಸಾರ್ವಜನಿಕ ಸಂಪರ್ಕ ಅಧಿಕಾರಿ**

Phone: +91-(0)80-22969300 / 22969301, Fax: +91-(0)80-22969222,
E-mail: contactus@bmrc.co.in Web: www.bmrc.co.in, CIN No.: U16286KA1994GOI016286

ಬೆಂಗಳೂರು ಮೆಟ್ರೋ ರೈಲು ನಿಗಮ ನಿಯಮಿತ
BANGALORE METRO RAIL CORPORATION LIMITED

BMRCL/CPRO/Media Release/2024-25 Date 27th December 2024

# MEDIA RELEASE

**Sub: Extension of Metro Train Services on the Eve of New Year**

Bangalore Metro Rail Corporation Limited (BMRCL) is pleased to announce extension of metro train timings on the Purple and Green Lines for the New Year's Eve, 2025. The last train will depart from all terminal stations at 02:00 AM on January 1, 2025, while the final train from Nadaprabhu Kempegowda Metro Station (Majestic) will leave at 2:40 AM.

Trains will operate at 10-minute intervals from 11.00 PM of 31st December 2024 up to the extended service period of the day. However, in view of anticipated congregation of crowd on MG Road, MG Road Metro Station will be closed for entry and exit from 11:00 PM on December 31, 2024. Trains will halt at nearby stations—Trinity and Cubbon Park for use by the commuters.

Passengers traveling after 11:00 PM from Trinity or Cubbon Park Metro Stations to any destination are advised to use a return journey paper ticket priced at ₹50. This paper ticket will be available for purchase in advance at all metro stations from 8:00 AM of 31st December 2024. Normal QR code tickets and cards are also valid for travel from these stations.

To avoid overcrowding at any particular station, commuters are advised that those heading towards Whitefield and Silk Institute shall use Trinity Metro Station for boarding, while passengers traveling towards Challaghatta and Madavara shall use the Cubbon Park Metro Station. BMRCL urges the public to plan their travel accordingly and extend their cooperation for a safe and smooth journey.

**BMRCL wishes everyone a safe and joyous New Year!**

**Chief Public Relations Officer**

**Phone: +91-(0)80-22969300 / 22969301, Fax: +91-(0)80-22969222,**
**E-mail: contactus@bmrc.co.in Web: www.bmrc.co.in, CIN No.: U16286KA1994GOI016286**